# ಕನ್ನಡ ಸಾಹಿತ್ಯ ಪರಿಷತ್ತು

ಸ್ಥಾಪನೆ : ೧೯೧೫

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪ ಫ್ಯಾಕ್ಸ್ : ೨೬೫೨೩೮೬೭
http://www.kasapa.in e-mail : kannadaparishattu@gmail.com


ಕ್ರಮಸಂಖ್ಯೆ : ಕಸಾಪ/ವಿವಿಧ ದತ್ತಿ/೨೦೨೪–೨೫ ದಿನಾಂಕ : ೨೯–೦೪–೨೦೨೪

## ೨೦೨೩ರಲ್ಲಿ ಪ್ರಕಟವಾದ ಕನ್ನಡ ಪುಸ್ತಕಗಳಿಗೆ

**ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿರುವ ವಿವಿಧ ದತ್ತಿನಿಧಿ ಪ್ರಶಸ್ತಿಗಳಿಗೆ ಪುಸ್ತಕಗಳನ್ನು ಕಳುಹಿಸಲು**

**ದಿನಾಂಕ: ೨೯–೦೪–೨೦೨೪ ರಿಂದ ಕೊನೆಯ ದಿನಾಂಕ : ೩೧–೦೫–೨೦೨೪ರ ವರೆಗೆ.**

---

**೦೧) ಬಿಸಲೇರಿ ಜಯಣ್ಣ ಮತ್ತು ಬಿಸಲೇರಿ ಬ್ರದರ್ಸ್ ದತ್ತಿ**

೨೦೨೩ರಲ್ಲಿ ಪ್ರಕಟವಾದ ವಿಜ್ಞಾನ ತಂತ್ರಜ್ಞಾನ ಪ್ರಕಾರಗಳಾದ ವೈದ್ಯಕೀಯ ಶಾಸ್ತ್ರ/ಯಂತ್ರಶಾಸ್ತ್ರ/ವಿದ್ಯನ್ಮಾನ ಶಾಸ್ತ್ರದಲ್ಲಿ ಕನ್ನಡದಲ್ಲಿ ರಚಿತವಾದ ಆ ವರ್ಷದ ಶ್ರೇಷ್ಠಕೃತಿಗಳಿಗೆ ರೂ.೧೦,೦೦೦=೦೦ಗಳ ಬಹುಮಾನ ನೀಡಲಾಗುವುದು

**೦೨) ಶ್ರೀಮತಿ ವಿ. ಗೌರಮ್ಮ ಗಂಗಾಧರಯ್ಯ ಮತ್ತು ಮಕ್ಕಳ ಸಾಹಿತ್ಯ ಪ್ರಶಸ್ತಿ**

**೨೦೨೩ ಜನವರಿ – ಡಿಸೆಂಬರ್‌ವರೆಗೆ** ಪ್ರಕಟವಾದ **ದಿ.ಜಚನಿ ಕೃತಿಗಳು, ವಿವಿಧ ಬೇರೆ ಕ್ಷೇತ್ರಗಳಲ್ಲಿ ಅಂದರೆ ಶಾಸನ, ಇತಿಹಾಸ, ಜಾನಪದ, ರೈತ ಹಾಗೂ ಕೃಷಿ ಸಂಬಂಧ ಗಣಿತ , ವಿಜ್ಞಾನ ಇತ್ಯಾದಿ ವಿಷಯಗಳಿಗೆ, ವೀರಶೈವ ಸಾಹಿತ್ಯ ಸಂಶೋಧನಾತ್ಮಕ ಕೃತಿಗಳು** ಎಂಬ ಪ್ರಕಾರಕ್ಕೆ ರೂ. ೧೦,೦೦೦/–ಗಳ ನಗದು ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು.

ಡಾ. ಶ್ರೀ ಜ.ಚ.ನಿ. ಸಾಹಿತ್ಯ ಸಮೀಕ್ಷೆ (ವೀರಶೈವ ಸಾಹಿತ್ಯ) ಹಾಗೂ ಸಾಹಿತ್ಯ ಕುರಿತು ಬರೆದ ಕೃತಿಗಳು–೨೦೨೩

೧ ರೈತರ ಹಾಗೂ ಕೃಷಿ ಸಂಬಂಧದ ಯಾವುದೇ ಪ್ರಕಾರದ ಕೃತಿಗಳು –೨೦೨೨

**೨. ಗಣಿತ, ವಿಜ್ಞಾನ ಸಂಬಂಧಿಸಿದ ಕೃತಿಗಳು – ೨೦೨೩**

೩ ಸಂಸ್ಕೃತದಿಂದ ಕನ್ನಡಕ್ಕೆ ಅನುವಾದಗೊಂಡ ಕೃತಿಗಳು – ೨೦೨೪

೪. ಸಂಶೋಧನಾತ್ಮಕ ಕೃತಿ – ೨೦೨೫

೫. ಶಾಸನ – ಇತಿಹಾಸ – ಜಾನಪದ ಸಂಶೋಧನ ವಿಷಯ ಕುರಿತು ಕೃತಿಗಳು –೨೦೨೬

**೦೩) ಶ್ರೀಮತಿ ಭಾರತಿ ಮೋಹನ ಕೋಟಿ ದತ್ತಿ 'ಅನುವಾದ ಸಾಹಿತ್ಯಕ್ಕಾಗಿ' :**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಅನುವಾದ ಸಾಹಿತ್ಯ ಕೃತಿಗೆ ರೂ.೧೦,೦೦೦/– ನಗದು ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು.

**೦೪) ಹೊಳಲ್ಕೆರೆ ಪದ್ಮಾವತಮ್ಮ ಶ್ರೀಪಾಲಶೆಟ್ಟಿ ಡಾ. ಮದನಕೇಸರಿ ಜೈನ ದತ್ತಿ :**

೨೦೨೩ನೆಯ ಇಸವಿಯಲ್ಲಿ ಪ್ರಕಟವಾದ ಯಾವುದೇ ಜೈನ ಸಾಹಿತ್ಯ ಧರ್ಮಕ್ಕೆ ಸಂಬಂಧಪಟ್ಟ ಕೃತಿಗೆ ಬಹುಮಾನ, ಬಹುಮಾನದ ಮೊತ್ತ ರೂ. **೭,೫೦೦/–**.

**೦೫) ಪೂಜ್ಯ ಸ್ವಸ್ತಿಶ್ರೀ ದೇವೇಂದ್ರಕೀರ್ತಿ ದತ್ತಿ:**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಜೈನಧರ್ಮದ ಇತಿಹಾಸ, ಸಾಹಿತ್ಯ ಸಂಸ್ಕೃತಿ ಹಾಗೂ ಕಲೆ, ಸಂಶೋಧನಾ ಗ್ರಂಥ, ಗ್ರಂಥ ಸಂಪಾದನೆ, ಪ್ರಾಚೀನ, ಗ್ರಂಥಗಳು ಹಾಗೂ ಅನುವಾದಕ್ಕೆ ಸಂಬಂಧಿಸಿದ **ರೂ. ೬,೦೦೦/–** ರೂ.ಗಳ ನಗದು ಹಣ ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು.

**೦೬) ವಸುದೇವ ಭೂಪಾಲಂ ದತ್ತಿ :**

೧. ೨೦೨೩ರಲ್ಲಿ ಪ್ರಕಟವಾದ ಅತ್ಯುತ್ತಮ ಕಾದಂಬರಿ ಕೃತಿಗೆ ರೂ.೫೦೦೦/– ಬಹುಮಾನ ನೀಡಲಾಗುವುದು.

೨. ೨೦೨೩ರಲ್ಲಿ ಪ್ರಕಟವಾದ ಸಣ್ಣಕಥಾ ಸಂಕಲನಗಳನ್ನು ಸ್ಪರ್ಧೆಗೆ ಕಳುಹಿಸಬಹುದು ರೂ. **೩೦೦೦/–** ಬಹುಮಾನ ನೀಡಲಾಗುವುದು.

೩. ೨೦೨೩ರಲ್ಲಿ ಪ್ರಕಟವಾದ ಮಕ್ಕಳ ಸಾಹಿತ್ಯ ಕೃತಿಗೆ **ರೂ.೨೦೦೦/–** ಬಹುಮಾನ ನೀಡಲಾಗುವುದು.

೪. ೨೦೨೩ರಲ್ಲಿ ಪ್ರಕಟವಾದ ವೈಚಾರಿಕ ಲೇಖನಗಳ ಕೃತಿಗೆ ರೂ. **೨೦೦೦/–** ಬಹುಮಾನ ನೀಡಲಾಗುವುದು.

**೦೭) ದಿ|| ಡಿ. ಮಾಣಿಕರಾವ ಸ್ಮರಣಾರ್ಥ ಹಾಸ್ಯ ಸಾಹಿತ್ಯ ದತ್ತಿ :**

**೨೦೨೩ ಜನವರಿ – ಡಿಸೆಂಬರ್‌ವರೆಗೆ** ಪ್ರಕಟವಾದ ಯಾವುದೇ ಪ್ರಕಾರದ ಹಾಸ್ಯ ಸಾಹಿತ್ಯ ಕೃತಿಗೆ ರೂ.೫೦೦೦/– ಬಹುಮಾನ ನೀಡಲಾಗುವುದು.

**೦೮) ದಿ|| ಡಾ. ಎ.ಎಸ್. ಧರಣೇಂದ್ರಯ್ಯ–ಮನೋವಿಜ್ಞಾನ ದತ್ತಿ :**

**೨೦೨೩ ಜನವರಿ – ಡಿಸೆಂಬರ್‌ವರೆಗೆ** ಪ್ರಕಟವಾದ ಮನೋವಿಜ್ಞಾನ ಸಾಹಿತ್ಯ ಕೃತಿಗೆ ರೂ.೫೦೦೦/– ಬಹುಮಾನ ನೀಡಲಾಗುವುದು.

**೦೯) ಭಾರತೀಸುತ ಸ್ಮಾರಕ ದತ್ತಿ ಪ್ರಶಸ್ತಿ:**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಕನ್ನಡ **'ಕಾದಂಬರಿ'** ಕೃತಿಗೆ **ರೂ. ೫,೦೦೦/–**ಗಳ ನಗದು ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು.

**೧೦) ಶ್ರೀಮತಿ ಲಕ್ಷ್ಮೀದೇವಿ ಶಾಂತರಸ ಹೆಂಬೇರಾಳು ದತ್ತಿ ಪ್ರಶಸ್ತಿ**

ಕನ್ನಡ ಮಹಿಳಾ ಬರಹಗಾರರ ವಿವಿಧ ಪ್ರಕಾರಗಳ **ಆರು ವರ್ಷಗಳ ಅವಧಿಯಲ್ಲಿ (೨೦೧೬ನೇ ಜನವರಿ ತಿಂಗಳಿಂದ ೨೦೨೩ನೇ ಡಿಸೆಂಬರ್ ತಿಂಗಳವರೆಗೆ)** ಪ್ರಥಮ ಮುದ್ರಣವಾಗಿ ಪ್ರಕಟವಾದ **'ಕಥೆ'** ಕೃತಿಗೆ ರೂ. ೫,೦೦೦/–ಗಳ ನಗದು ಮತ್ತು ಪ್ರಶಸ್ತಿ ಪತ್ರ ನೀಡಲಾಗುವುದು.

**೧೧) ಪ್ರಕಾಶಕ ಆರ್. ಎನ್. ಹಬ್ಬು ದತ್ತಿ ಪ್ರಶಸ್ತಿ**

**೨೦೨೩ ಜನವರಿ – ಡಿಸೆಂಬರ್‌ವರೆಗೆ** ಪ್ರಕಟವಾದ **'ಕಥಾ ಸಂಕಲನ'** ಪ್ರಕಾರದ ಪುಸ್ತಕ ಪ್ರಕಟಣೆ ಮಾಡಿದ **'ಪ್ರಕಾಶನ ಸಂಸ್ಥೆಗೆ'** ರೂ. ೫,೦೦೦=೦೦ ನಗದು ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು. **ಕನ್ನಡ ಪುಸ್ತಕ ಪ್ರಕಾಶನ ಸಂಸ್ಥೆ**ಗಳು ಮಾತ್ರ ಈ ಸ್ಪರ್ಧೆಯಲ್ಲಿ ಭಾಗವಹಿಸಬಹುದು.

**೧೨) ಅಮೃತ ಮಹೋತ್ಸವ ಸಾಹಿತ್ಯ ಸಮ್ಮೇಳನದ ಸವಿ ನೆನಪಿನ ದತ್ತಿ (ಎಲ್. ಬಸವರಾಜು ದತ್ತಿ)**

**೨೦೨೩ ಜನವರಿ – ಡಿಸೆಂಬರ್‌ವರೆಗೆ** ಸಾಲಿನ ಯಾವುದೇ ಪ್ರಕಾರದ **ಉತ್ತಮ ದಲಿತ ಸಾಹಿತ್ಯ** ಕೃತಿಗೆ ರೂ. ೫,೦೦೦/– (ಐದು ಸಾವಿರ ರೂಪಾಯಿ)ಗಳ ನಗದು ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು.

**೧೩) ನಿಡಸಾಲೆ ಪುಟ್ಟಸ್ವಾಮಯ್ಯ ಸಾಹಿತ್ಯ ಪ್ರಶಸ್ತಿ ದತ್ತಿ**

**೨೦೨೩ ಜನವರಿ – ಡಿಸೆಂಬರ್‌ವರೆಗೆ ಕನ್ನಡದಲ್ಲಿ ಪ್ರಕಟಣೆಗೊಂಡ ಯಾವುದೇ ಪ್ರಕಾರದ ಶ್ರೇಷ್ಠ ಕೃತಿ**ಯನ್ನು ಸ್ಪರ್ಧೆಗೆ ಕಳುಹಿಸಬಹುದು. **ಪ್ರತಿವರ್ಷ ಕನ್ನಡದಲ್ಲಿ ಪ್ರಕಟಗೊಂಡ ಯಾವುದೇ ಪ್ರಕಾರದ ಶ್ರೇಷ್ಠ ಕೃತಿಗೆ** ರೂ, ೫,೦೦೦/– ಗಳ ನಗದು ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು.

**೧೪) ಗುಬ್ಬಿ ಸೋಲೂರು ಮುರುಗಾರಾಧ್ಯ ದತ್ತಿ ಪ್ರಶಸ್ತಿ**

**೨೦೨೩ ಜನವರಿ – ಡಿಸೆಂಬರ್‌ವರೆಗೆ** ಪ್ರಕಟವಾದ ಶ್ರೇಷ್ಟ ***ಕಾದಂಬರಿಗೆ*** ರೂ. ೫,೦೦೦/–ಗಳ ನಗದು ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು.

೧೫) **ಶ್ರೀಮತಿ ಗೌರುಭಟ್ ದತ್ತಿ ಪ್ರಶಸ್ತಿ**

**೨೦೨೩ ಜನವರಿ – ಡಿಸೆಂಬರ್‌ವರೆಗೆ** ಪ್ರಕಟವಾದ ಮಹಿಳೆಯರಿಗೆ ಸಂಬಂಧಿಸಿದ ಮಹಿಳೆಯರ ಲೇಖನಗಳಿಗೆ ರೂ. ೫,೦೦೦/–ಗಳ ನಗದು ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು.

೧೬) **ಶ್ರೀಮತಿ ಗಂಗಮ್ಮ ಶ್ರೀ ಟಿ. ಶಿವಣ್ಣ ದತ್ತಿ:**

**೨೦೨೩ ಜನವರಿಯಿಂದ ಡಿಸೆಂಬರ್ ರವರೆಗೂ** ಪ್ರಕಟವಾದ ಜಾತ್ಯಾತೀತ ವಿಚಾರವನ್ನೊಳಗೊಂಡ ಕೃತಿಗೆ ೫,೦೦೦/– ನಗದು ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು.

೧೭) **ಡಾ. ಹಾ.ಮಾ. ನಾಯಕ ಸ್ಮಾರಕ ದತ್ತಿ ಪ್ರಶಸ್ತಿ**

**೨೦೨೩ ಜನವರಿ – ಡಿಸೆಂಬರ್‌ವರೆಗೆ** ಪ್ರಕಟವಾದ ಶ್ರೇಷ್ಠ ವಿಚಾರ ಸಾಹಿತ್ಯ ಕೃತಿಗೆ ರೂ. **೫೦೦೦/–** ಬಹುಮಾನ ನೀಡಲಾಗುವುದು.

೧೮) **ಡಾ. ವೀಣಾ ಶಾಂತೇಶ್ವರ ದತ್ತಿ**

**೨೦೨೩ ಜನವರಿ – ಡಿಸೆಂಬರ್‌ವರೆಗೆ** ಪ್ರಕಟವಾದ ಶ್ರೇಷ್ಠ ಕಥಾ ಸಂಕಲನ ಕೃತಿಗೆ ರೂ. **೫೦೦೦/–** ಬಹುಮಾನ ನೀಡಲಾಗುವುದು.

೧೯) **ಸಾರಂಗಿ ವೆಂಕಟರಾಮಯ್ಯ ಶ್ರೀನಿವಾಸರಾವ್ ದತ್ತಿ:**

**೨೦೨೩ ಜನವರಿ – ಡಿಸೆಂಬರ್‌ವರೆಗೆ** ಪ್ರಕಟವಾದ ಮಕ್ಕಳ ಸಾಹಿತ್ಯ ಕ್ಷೇತ್ರದ **ಗದ್ಯ** ಪ್ರಕಾರದ ಕತೆಗೆ ಸಂಬಂಧಿಸಿದಂತೆ ಕನಿಷ್ಠ ೬೫ ಪುಟಗಳುಳ್ಳ ಪುಸ್ತಕಕ್ಕೆ ರೂ.೨೦೦೦/– ಬಹುಮಾನ ನೀಡಲಾಗುವುದು.

೨೦) **ಪಳಕಳ ಸೀತಾರಾಮಭಟ್ಟ ದತ್ತಿ:**

**೨೦೨೩ ಜನವರಿ – ಡಿಸೆಂಬರ್‌ವರೆಗೆ** ಪ್ರಕಟವಾದ ಮಕ್ಕಳ ಸಾಹಿತ್ಯ ಕೃತಿಗೆ ರೂ.೨೦೦೦/– ಬಹುಮಾನ ನೀಡಲಾಗುವುದು.

೨೧) **ಶ್ರೀಮತಿ ಜಯಲಕ್ಷ್ಮಿ ಮತ್ತು ಶ್ರೀ ಬಾಪು ರಾಮಣ್ಣ ದತ್ತಿ ಪ್ರಶಸ್ತಿ**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಸಣ್ಣ ಕಥಾ ಸಂಕಲನಕ್ಕೆ ರೂ. ೨,೦೦೦/– ನಗದು ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು.

೨೨) **ದಿ|| ಗೌರಮ್ಮ ಹಾರ್‍ನಹಳ್ಳಿ ಕೆ. ಮಂಜಪ್ಪ ದತ್ತಿ:**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಲೇಖಕಿಯರಿಂದ ರಚಿತವಾದ ಯಾವುದೇ ಪ್ರಕಾರದ ಕೃತಿಗೆ ರೂ. ೧೦೦೦/– ಬಹುವಮಾನ ನೀಡಲಾಗುವುದು.

೨೩) **ಶ್ರೀಮತಿ ಜಯಲಕ್ಷ್ಮಮ್ಮ ಬಿ.ಎಸ್. ಸಣ್ಣಯ್ಯ ದತ್ತಿ:**

**೨೦೨೩ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಪ್ರಾಚೀನ ಸಂಪಾದಿತ ಕೃತಿಗೆ ರೂ. **೧೦೦೦/–** ಬಹುಮಾನ ನೀಡಲಾಗುವುದು. ಸ್ಪರ್ಧೆಯಲ್ಲಿ ಯಾರು ಬೇಕಾದರೂ ಭಾಗವಹಿಸಬಹುದು.

೨೪) **ಜಿ.ಆರ್. ರೇವಯ್ಯ ದತ್ತಿ :**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ದೀನ ದಲಿತರ ಮತ್ತು ಶೋಷಿತ ವರ್ಗಗಳ ರಕ್ಷಣೆಗೆ ಶ್ರಮಿಸುವ ವ್ಯಕ್ತಿಗಳ ಬಗ್ಗೆ ಸಾಹಿತ್ಯ ಕೃತಿಗೆ ರೂ.**೧೦೦೦/–** ಬಹುಮಾನ ನೀಡಲಾಗುವುದು. ಉದಯೋನ್ಮುಖ ಬರಹಗಾರರು/ಬರಹಗಾರ್ತಿಯರು ಸ್ಪರ್ಧೆಯಲ್ಲಿ ಭಾಗವಹಿಸಬಹುದು.

೨೫) **ಡಾ|| ಆರ್.ಜೆ. ಗಲಗಲಿ ದತ್ತಿ :**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಉತ್ತಮ ಕವನ ಸಂಕಲನ ಒಂದಕ್ಕೆ ರೂ. **೧೦೦೦/–** ಬಹುಮಾನ ನೀಡಲಾಗುವುದು. **ಬೆಳಗಾವಿ ಜಿಲ್ಲೆಯ ಬರಹಗಾರರಿಗೆ ಮಾತ್ರ ಅವಕಾಶ**

**೨೬) ದಿ|| ಕಾಕೋಳು ಸರೋಜಮ್ಮ ದತ್ತಿ :**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ನಾಟಕ ಪ್ರಕಾರಕ್ಕೆ ರೂ.೧೦೦೦/– ಬಹುಮಾನ ನೀಡಲಾಗುವುದು.

**೨೭) ನಾ.ಕು. ಗಣೇಶ್ ದತ್ತಿ :**

**೨೦೨೩** ರಲ್ಲಿ ಪ್ರಥಮ ಕವನ ಸಂಕಲನಕ್ಕೆ **ರೂ.೧೦೦೦=೦೦** ಬಹುಮಾನ ನೀಡಲಾಗುವುದು.

**೨೮) ಶ್ರೀಮತಿ ಸುಮನ್ ಸೋಮಶೇಖರ್ ಸೋಮವಾರಪೇಟೆ ದತ್ತಿ ಪ್ರಶಸ್ತಿ**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಕವನ ಸಂಕಲನಕ್ಕೆ ರೂ. ೧,೦೦೦/– ನಗದು ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು.

**೨೯) ಶ್ರೀ ಹೇಮರಾಜ್ ಜಿ.ಎನ್. ಕುಶಾಲನಗರ ದತ್ತಿ ಪ್ರಶಸ್ತಿ**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಸಣ್ಣ ಕಥಾ ಸಂಕಲನಕ್ಕೆ ರೂ. ೧,೦೦೦/– ನಗದು ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು.

**೩೦) ಮಲ್ಲಿಕಾ ಪ್ರಶಸ್ತಿ ದತ್ತಿ :**

**೨೦೨೩**ರಲ್ಲಿ ಪ್ರಕಟವಾದ ಅತ್ಯುತ್ತಮ ಲೇಖಕಿಯರ ಕೃತಿಗೆ ರೂ. **೫೦೦/–** ಬಹುಮಾನ ನೀಡಲಾಗುವುದು. ಹಿರಿಯ–ಕಿರಿಯ ಲೇಖಕಿಯರು ಎಂಬ ವ್ಯತ್ಯಾಸವಿಲ್ಲ. ಯಾರು ಬೇಕಾದರೂ ಭಾಗವಹಿಸಬಹುದು. ಸ್ವತಂತ್ರ ಅಥವಾ ಅನುವಾದಿತ ಕೃತಿಯಾದರೂ ಆಗಬಹುದು.

**೩೧) ಅಂತರರಾಷ್ಟ್ರೀಯ ಮಹಿಳಾ ವರ್ಷದ 'ಮಹಿಳಾ ದತ್ತಿ':**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಮಹಿಳೆಯರ ಅತ್ಯುತ್ತಮ ಕೃತಿಗೆ ರೂ. **೫೦೦/–** ಬಹುಮಾನವನ್ನು ನೀಡಲಾಗುವುದು. ಸ್ವತಂತ್ರ ಕೃತಿಯಾಗಿರಬೇಕು. ಅನುವಾದ ಕೃತಿಗಳನ್ನಾಗಲೀ, ಪುನರ್ ಮುದ್ರಣಗೊಂಡ ಕೃತಿಗಳನ್ನಾಗಲೀ ಪರಿಗಣಿಸುವುದಿಲ್ಲ.

**೩೨) ಶ್ರೀಮತಿ ಶಾರದಾ ರಾಮಲಿಂಗಪ್ಪ ದತ್ತಿ :**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಲೇಖಕಿ ಒಬ್ಬರ ಮಹತ್ವದ ಕೃತಿಗೆ ರೂ. **೫೦೦/–** ಬಹುಮಾನ ನೀಡಲಾಗುವುದು.

**೩೩) ಲಿಂ. ಲಲಿತಾದೇವಿ ಗುರುಸಿದ್ದಪ್ಪ ಸಿಂಧೂರ ದತ್ತಿ :**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಅತ್ಯುತ್ತಮ ಮಹಿಳಾ ಸಾಹಿತ್ಯದ (ಮಹಿಳೆಯರನ್ನು ಕುರಿತು ಅಥವಾ ಮಹಿಳೆಯರಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ರಚಿತವಾದ) ಕೃತಿಗೆ ರೂ. **೫೦೦/–** ಬಹುಮಾನ ನೀಡಲಾಗುವುದು.

**೩೪) ಶ್ರೀಮತಿ ನೀಲಗಂಗಾ ದತ್ತಿ :**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಮಹಿಳೆಯರ ಪ್ರಬಂಧ, ಕವನ, ಕಾವ್ಯ ಮತ್ತು ಸಮಕಾಲೀನ ಮೌಲಿಕ ವಿಚಾರವುಳ್ಳ ಗ್ರಂಥಕ್ಕೆ ರೂ. **೫೦೦/–** ಬಹುಮಾನ ನೀಡಲಾಗುವುದು.

**೩೫) ಶ್ರೀಮತಿ ಕೆ.ಎಸ್. ಭಾರತಿ ರಾಜಾರಾಮ್ ಮಧ್ಯಸ್ಥ ದತ್ತಿ:**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಮಹಿಳೆಯರ ಅತ್ಯುತ್ತಮ ಕಾದಂಬರಿಗೆ ರೂ. **೫೦೦/–** ಬಹುಮಾನ ನೀಡಲಾಗುವುದು. ಕೃತಿ ಸ್ವತಂತ್ರವಾಗಿರಬೇಕು. ಅನುವಾದವಾಗಿರಬಾರದು.

**೩೬) ಶ್ರೀಮತಿ ಶಾರದಾ ಆರ್. ರಾವ್ ದತ್ತಿ :**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಉದಯೋನ್ಮುಖ ಮಹಿಳಾ ಬರಹಗಾರರ ಅತ್ಯುತ್ತಮ ಕೃತಿಗೆ ರೂ. **೨೫೦/–** ಬಹುಮಾನ ನೀಡಲಾಗುವುದು.

**೩೭) ದಿ|| ಎಚ್. ಕರಿಯಣ್ಣ ದತ್ತಿ:**

೨೦೨೩ರಲ್ಲಿ ಲೇಖಕಿಯರಿಂದ ರಚಿತವಾಗಿರುವ ಮಕ್ಕಳ ಪುಸ್ತಕಕ್ಕೆ ರೂ. ೫೦೦/- ಬಹುಮಾನ ನೀಡಲಾಗುವುದು.

**೩೮) ಡಾ|| ಎಚ್. ನರಸಿಂಹಯ್ಯ ದತ್ತಿ :**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ವೈಚಾರಿಕ ಹಾಗೂ ವೈಜ್ಞಾನಿಕ ಮನೋಭಾವಕ್ಕೆ ಸಂಬಂಧಿಸಿದ ಶ್ರೇಷ್ಠ ಕೃತಿಗೆ ರೂ.೫೦೦/- ಬಹುಮಾನ ನೀಡಲಾಗುವುದು.

**೩೯) ದಿವಂಗತ ಶ್ರೀಮತಿ ಕೆ.ವಿ. ರತ್ನಮ್ಮ ದತ್ತಿ :**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಉದಯೋನ್ಮುಖ ಬರಹಗಾರರ ಅತ್ಯುತ್ತಮ ಚೊಚ್ಚಲ **ಪದ್ಯಕೃತಿ** ಒಂದಕ್ಕೆ ರೂ. ೫೦೦/- ಬಹುಮಾನ ನೀಡಲಾಗುವುದು. ಸ್ಪರ್ಧೆಯಲ್ಲಿ ಯಾರು ಬೇಕಾದರೂ ಭಾಗವಹಿಸಬಹುದು.

**೪೦) ರತ್ನಾಕರವರ್ಣಿ-ಮುದ್ದಣ-ಅನಾಮಿಕ ದತ್ತಿ :**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಅತ್ಯುತ್ತಮ **ಗದ್ಯಕೃತಿ** ಒಂದಕ್ಕೆ ಹಾಗೂ ಅತ್ಯುತ್ತಮ **ಪದ್ಯಕೃತಿ** ಒಂದಕ್ಕೆ ತಲಾ ರೂ. ೫೦೦/- ಬಹುಮಾನ ನೀಡಲಾಗುವುದು. ಸ್ಪರ್ಧೆಯಲ್ಲಿ ಯಾರು ಬೇಕಾದರೂ ಭಾಗವಹಿಸಬಹುದು.

**೪೧) ಪಿ. ಶಾಂತಿಲಾಲ್ ದತ್ತಿ :**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಜೈನ ಸಾಹಿತ್ಯ ಕುರಿತ ಯಾವುದೇ ಪ್ರಕಾರದ ಕನ್ನಡ ಪುಸ್ತಕಕ್ಕೆ ರೂ. ೫೦೦/- ಬಹುಮಾನ ನೀಡಲಾಗುವುದು.

**೪೨) ಅಕ್ಕಮ್ಮ ಗಿರಿಗೌಡ ರುದ್ರಪ್ಪ ದತ್ತಿ :**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾಗಿರುವ ಅತ್ಯುತ್ತಮವಾದ 'ಜಾನಪದ ಸಾಹಿತ್ಯ ಕೃತಿ' ಒಂದಕ್ಕೆ ರೂ. ೫೦೦/- ಬಹುಮಾನ ನೀಡಲಾಗುವುದು.

**೪೩) ಕುಂಬಾಸ ಪ್ರಶಸ್ತಿ ದತ್ತಿ :**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಕನ್ನಡ ಹಾಸ್ಯ ಸಾಹಿತ್ಯ ಕೃತಿಗೆ ರೂ. ೫೦೦/- ಬಹುಮಾನ ನೀಡಲಾಗುವುದು. (ಹಾಸ್ಯ ಸಾಹಿತ್ಯದ ಬಗ್ಗೆ ಬರೆದಿರುವ ಪುಸ್ತಕ, ಲೇಖನ, ಚುಟುಕು ಇತ್ಯಾದಿಗಳ ಬಗ್ಗೆ ವಿವರವಾದ ಪರಿಚಯ ಬರೆದು ಕಳುಹಿಸುವುದು.)

**೪೪) ಪ್ರೊ|| ಡಿ.ಸಿ. ಅನಂತಸ್ವಾಮಿ ದತ್ತಿ :**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಅತ್ಯುತ್ತಮ ಚೊಚ್ಚಲ ಕವನ ಸಂಕಲನಕ್ಕೆ ರೂ. ೫೦೦/- ಬಹುಮಾನ ನೀಡಲಾಗುವುದು. ಸ್ಪರ್ಧೆಯಲ್ಲಿ ಯಾರು ಬೇಕಾದರೂ ಭಾಗವಹಿಸಬಹುದು.

**೪೫) 'ಸಿಸು' ಸಂಗಮೇಶ ದತ್ತಿ :**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಅತ್ಯುತ್ತಮ ಮಕ್ಕಳ ಸಾಹಿತ್ಯ ಕೃತಿಗೆ ರೂ. ೫೦೦/- ಬಹುಮಾನ ನೀಡಲಾಗುವುದು. ಸ್ಪರ್ಧೆಯಲ್ಲಿ ಯಾರು ಬೇಕಾದರೂ ಭಾಗವಹಿಸಬಹುದು.

**೪೬) ಶ್ರೀಮತಿ ಪಂಪಮ್ಮ-ಶರಣೇಗೌಡ ವಿರುಪಾಪುರ ದತ್ತಿ:**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಉತ್ತಮ ಸಾಹಿತ್ಯ ಕೃತಿಗೆ ರೂ. ೫೦೦/- ಬಹುಮಾನ ನೀಡಲಾಗುವುದು **(ರಾಯಚೂರು ಜಿಲ್ಲೆಯ ಬರಹಗಾರರಿಗೆ ಮಾತ್ರ ಸೀಮಿತ)**

**೪೭) ಶ್ರೀ ಕೆ. ವಾಸುದೇವಾಚಾರ್ ದತ್ತಿ :**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಸಣ್ಣಕಥಾ ಸಂಕಲನ ಕೃತಿಗೆ ರೂ.೫೦೦/- ಬಹುಮಾನ ನೀಡಲಾಗುವುದು. ಸ್ಪರ್ಧೆಯಲ್ಲಿ ಯಾರು ಬೇಕಾದರು ಭಾಗವಹಿಸಬಹುದು.

೪೮) **ಅಸುಂಡಿ ಹುದ್ದಾರ್ ಕೃಷ್ಣರಾವ್ ಸ್ಮಾರಕ ದತ್ತಿ :**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ ಹರಿದಾಸ ಸಾಹಿತ್ಯ ಕುರಿತ ಕೃತಿಗೆ ರೂ. **೨೫೦/–** ಬಹುಮಾನ ನೀಡಲಾಗುವುದು.

೪೯) **ಜಿ.ಪಿ. ರಾಜರತ್ನಂ ಸಂಸ್ಮರಣ ದತ್ತಿ: (ಮಕ್ಕಳ ಪುಸ್ತಕ ಬಹುಮಾನ ಸ್ಪರ್ಧೆ – ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಬರಹಗಾರರಿಗೆ ಮಾತ್ರ ಅವಕಾಶ)**

**೨೦೨೩ ಜನವರಿಯಿಂದ ಡಿಸೆಂಬರ್‌ವರೆಗೂ** ಪ್ರಕಟವಾದ **ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಬರಹಗಾರರು** ಬರೆದಿರುವ ಅತ್ಯುತ್ತಮ ಮಕ್ಕಳ ಪುಸ್ತಕಕ್ಕೆ ರೂ.**೨೫೦/–** ಬಹುಮಾನ ನೀಡಲಾಗುವುದು. (ಪುಸ್ತಕ ೧೫ ವರ್ಷ ವಯಸ್ಸಿನ ಒಳಗಿರುವ ಮಕ್ಕಳು ಓದುವಂತಹ ಕೃತಿಯಾಗಿರಬೇಕು).

೫೦) **ಡಾ. ಜಿ. ಚಂದ್ರಮೌಳೀಶ್ವರ ದತ್ತಿ : ೨೦೨೩ರಲ್ಲಿ** ಪ್ರಕಟವಾದ ಶ್ರೇಷ್ಠ ಕಾವ್ಯ ಪ್ರಕಾರ ಕೃತಿಗೆ ರೂ. ೨೦೦೦/–ಗಳ ಬಹುಮಾನ ನೀಡಿ ಗೌರವಿಸಲಾಗುವುದು

೫೧) **ಶ್ರೀಮತಿ ಬೋರಮ್ಮ ಗೋವಿಂದಪ್ಪ ದತ್ತಿ : ೨೦೨೩ ರಲ್ಲಿ** ಪ್ರಕಟವಾದ ಶ್ರೇಷ್ಠ ಸಣ್ಣ ಕಥಾ ಸಂಕಲನ ಪ್ರಕಾರದ ಕೃತಿಗೆ ರೂ. ೨೦೦೦/–ಗಳ ಬಹುಮಾನ ನೀಡಿ ಗೌರವಿಸಲಾಗುವುದು.

೫೨) **ಡಾ. ರಮಾನಂದ ಮತ್ತು ಶ್ರೀಮತಿ ಶಾಂತಕುಮಾರಿ ದತ್ತಿನಿಧಿ ಯೋಜನೆ :** ಕಾಸರಗೋಡು ಜಿಲ್ಲೆಗೆ ಸೀಮಿತ ೨೦೨೩ ರಲ್ಲಿ ಪ್ರಕಟವಾದ **ಕನ್ನಡ ಭಾಷೆ**ಯ ಒಂದು ಕೃತಿಗೆ **ಕಾವ್ಯ, ಕಥೆ, ಪ್ರಬಂಧ ಸಂಕಲನಕ್ಕೆ** ಎಲ್ಲವನ್ನೂ ಒಟ್ಟಾಗಿ ಪರಿಗಣಿಸಹಬುದು. ಅಥವಾ ಒಂದೊಂದು ವರ್ಷಕ್ಕೆ ಒಂದೊಂದು ಪ್ರಕಾರಕ್ಕೆ ರೂ. ೧೦,೦೦೦/–ಬಹುಮಾನ ನೀಡಿ ಗೌರವಿಸಲಾಗುವುದು.

೫೩) **ಡಾ. ಹೆಚ್.ಎಸ್. ಮದನಕೇಸರಿ ಮತ್ತು ಶ್ರೀಮತಿ ಎಂ.ಪಿ. ಗುಣಮಾಲ ದತ್ತಿ** : ಜೈನಧರ್ಮದ ಲೇಖಕರಿಗೆ ಮಾತ್ರ. ಸೀಮಿತವಾಗಿದ್ದು, ೨೦೨೩ ರಲ್ಲಿ ಪ್ರಕಟವಾದ ಸೃಜನಾತ್ಮಕ ಕೃತಿಗಳ ಪ್ರಕಾರವಾದ **ಕಾದಂಬರಿ, ಕಾವ್ಯ, ನಾಟಕ, ಪ್ರಬಂಧ, ಜನಪದ,** ಪ್ರಕಾರಗಳಿಗೆ ರೂ. ೫,೦೦೦/–ಬಹುಮಾನ ನೀಡಿ ಗೌರವಿಸಲಾಗುವುದು.

**<u>ಮೇಲ್ಕಂಡ ಎಲ್ಲ ಸ್ಪರ್ಧೆಗಳಿಗೂ ಅನ್ವಯಿಸುವ ನಿಯಮಗಳು:</u>**

೧) ಪ್ರತಿ ಪ್ರವೇಶಕ್ಕೆ ತಲಾ ಮೂರು ಪುಸ್ತಕಗಳನ್ನು **ಗೌರವ ಕಾರ್ಯದರ್ಶಿ, ಕನ್ನಡ ಸಾಹಿತ್ಯ ಪರಿಷತ್ತು, ಬೆಂಗಳೂರು–೫೬೦ ೦೧೮. ದಿನಾಂಕ: ೩೧–೦೫–೨೦೨೪ರ** ಒಳಗೆ ತಲುಪುವಂತೆ ಕಳುಹಿಸಬೇಕು. ತಡವಾಗಿ ಬಂದ ಪುಸ್ತಕಗಳನ್ನು ಸ್ವೀಕರಿಸಲಾಗುವುದಿಲ್ಲ

೨) ಪರಿಶೀಲನೆಗೆ ಬಂದ ಪುಸ್ತಕಗಳನ್ನು ಹಿಂದಿರುಗಿಸಲಾಗುವುದಿಲ್ಲ

೩) ಬಹುಮಾನದ ಬಗ್ಗೆ ಪರಿಷತ್ತು ನೇಮಿಸುವ ತೀರ್ಪುಗಾರರು ನೀಡುವ ಶಿಫಾರಸ್ಸನ್ನು ಗಮನಿಸಿ ಪರಿಷತ್ತು ಅಂತಿಮ ನಿರ್ಧಾರ ಕೈಗೊಳ್ಳುತ್ತದೆ.

೪) ಯಾವುದೇ ಪುಸ್ತಕ ಪ್ರಶಸ್ತಿ ಪುರಸ್ಕೃತರು ಪ್ರಶಸ್ತಿ ಪಡೆದ ವಿಭಾಗಕ್ಕೆ ೩ ವರ್ಷ ಅರ್ಜಿ ಸಲ್ಲಿಸುವಂತಿಲ್ಲ

೫) ಯಾವುದೇ ಪುಸ್ತಕ ದತ್ತಿ ಪುರಸ್ಕಾರ ಬರಹಗಾರರಿಗೆ ೩ ಸಲ ಬಂದಿದ್ದೇ ಆದರೆ ಜೀವಮಾನ ಪೂರ್ತಿ ದತ್ತಿ ಪುರಸ್ಕಾರಕ್ಕೆ ಅವರು ಅರ್ಜಿ ಸಲ್ಲಿಸುವಂತಿಲ್ಲ

೬) ಯಾವುದೇ ಪ್ರಶಸ್ತಿಗೆ ಅರ್ಹ ಗ್ರಂಥಗಳು ಬಾರದಿದ್ದಾಗ ಆ ವರ್ಷ ಪ್ರಶಸ್ತಿಯನ್ನು ನೀಡದಿರುವ ಹಕ್ಕು ಪರಿಷತ್ತಿಗೆ ಇರುತ್ತದೆ.

೭) ಒಂದಕ್ಕಿಂತ ಹೆಚ್ಚು ಗ್ರಂಥಗಳು ಅತ್ಯುತ್ತಮವೆಂದು ಪರಿಗಣಿತವಾದರೆ ಬಹುಮಾನದ ಹಣವನ್ನು ಹಂಚಿ ವಿತರಿಸುವ ಹಕ್ಕು ಪರಿಷತ್ತಿಗೆ ಇರುತ್ತದೆ.

೮) ಪಿಎಚ್.ಡಿ. ಗ್ರಂಥಗಳು ಹಾಗೂ ನಿಘಂಟುಗಳನ್ನು ಸ್ಪರ್ಧೆಗೆ ಪರಿಗಣಿಸುವುದಿಲ

೯) **ಭಾಗವಹಿಸುತ್ತಿರುವ ಸ್ಪರ್ಧೆಯ ದತ್ತಿ ಹೆಸರನ್ನು ಪುಸ್ತಕದ ಮೊದಲ ಒಳಪುಟದಲ್ಲಿ ಸ್ಪಷ್ಟವಾಗಿ ಸೂಚಿಸತಕ್ಕದ್ದು.**

೧೦) ಸ್ಪರ್ಧೆಯಲ್ಲಿ ಭಾಗವಹಿಸುವವರು ತಮ್ಮ ಹೆಸರು ವಿಳಾಸ, ದೂರವಾಣಿ ಹಾಗೂ ಮೊಬೈಲ್ ಸಂಖ್ಯೆಗಳನ್ನು ನಮೂದಿಸಬೇಕು.

೧೧) ಹೆಚ್ಚಿನ ವಿವರಗಳಿಗೆ ಸ್ವ–ವಿಳಾಸದ ಸ್ಟಾಂಪ್ ಹಚ್ಚಿದ ಲಕೋಟೆ ಇಟ್ಟು ಪತ್ರ ಬರೆಯಬಹುದು

೧೨) ಪ್ರತಿ ಪುಸ್ತಕ ದತ್ತಿ ಪ್ರಶಸ್ತಿಗಳಿಗೂ ತಲಾ ಮೂರು ಪ್ರತಿಗಳನ್ನು ಕಳುಹಿಸಬೇಕು.

೧೩) ಪುಸ್ತಕ ದತ್ತಿ ಪ್ರಶಸ್ತಿಗೆ ಪುಸ್ತಕಗಳನ್ನು ಕಳುಹಿಸುವವರು ಸಮಗ್ರ ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆಯಾದ ಕನ್ನಡ ಸಾಹಿತ್ಯ ಪರಿಷತ್ತಿನ ಆಜೀವ ಸದಸ್ಯತ್ವವನ್ನು ಹೊಂದಿರಬೇಕು. ಪುಸ್ತಕ ಕಳುಹಿಸುವಾಗ ತಮ್ಮ ಸದಸ್ಯತ್ವ ಸಂಖ್ಯೆಯನ್ನು ನಮೂದಿಸಿ ಕಳುಹಿಸಬೇಕು. ಒಂದು ವೇಳೆ ಇನ್ನೂ ಸದಸ್ಯರಾಗಿರದಿದ್ದಲ್ಲಿ ಪರಿಷತ್ತಿನ ಆಜೀವ ಸದಸ್ಯತ್ವವನ್ನು ಪಡೆದುಕೊಳ್ಳುವುದು.

**ಹೆಚ್ಚಿನ ಮಾಹಿತಿಯನ್ನು ಪರಿಷತ್ತಿನ ಅಂತರ್ಜಾಲ ತಾಣ www.kasapa.in ದ ಮೂಲಕ ಸಹ ಪಡೆದು ಕೊಳ್ಳಬಹುದು.**

**ದೂರವಾಣಿ : ೦೮೦–೨೬೬೧೨೯೯೧/೨೬೬೨೩೫೮೪ / ೨೨೪೨೩೮೬೭ / ೨೬೬೭೨೯೯೨**

**(ಡಾ. ಪದ್ಮಿನಿ ನಾಗರಾಜು)**
ಗೌರವ ಕಾರ್ಯದರ್ಶಿ